**ಇಥಿಯೋಪಿಯಾ ಪ್ರಧಾನಮಂತ್ರಿಯೊಂದಿಗೆ ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಿದ ಪ್ರಧಾನಿ (ಡಿಸೆಂಬರ್ 16, 2025)**

ಡಿಸೆಂಬರ್ 16, 2025

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಅಡಿಸ್ ಅಬಾಬಾದ ರಾಷ್ಟ್ರೀಯ ಅರಮನೆಯಲ್ಲಿ ಇಥಿಯೋಪಿಯಾ ಸಂಯುಕ್ತ ಪ್ರಜಾಸತ್ತಾತ್ಮಕ ಗಣರಾಜ್ಯದ ಪ್ರಧಾನಮಂತ್ರಿ ಗೌರವಾನ್ವಿತ ಡಾ. ಅಬಿ ಅಹ್ಮದ್ ಅವರನ್ನು ಭೇಟಿ ಮಾಡಿದರು. ಅರಮನೆಗೆ ಆಗಮಿಸಿದ ಪ್ರಧಾನಮಂತ್ರಿ ಮೋದಿ ಅವರನ್ನು ಡಾ. ಅಬಿ ಅಹ್ಮದ್ ಅವರು ಆತ್ಮೀಯವಾಗಿ ಸ್ವಾಗತಿಸಿದರು ಮತ್ತು ವಿಧ್ಯುಕ್ತ ಸ್ವಾಗತ ನೀಡಿದರು.

2. ಉಭಯ ನಾಯಕರ ನಡುವೆ ಪರಸ್ಪರ ಮುಖಾಮುಖಿಯಾಗಿ, ನಿರ್ಬಂಧಿತವಾಗಿ ಮತ್ತು ನಿಯೋಗ ಮಟ್ಟದಲ್ಲಿ ಭೇಟಿಗಳು ನಡೆದವು. ಹಲವು ಶತಮಾನಗಳಿಂದ ರೂಪು ತಳೆದ ನಾಗರಿಕ ಸಂಬಂಧಗಳು ಮತ್ತು ಜನರ ನಡುವಿನ ಬಲವಾದ ಸಂಬಂಧಗಳನ್ನು ಆಧರಿಸಿದ ದ್ವಿಪಕ್ಷೀಯ ಸಂಬಂಧದ ಸಂಪೂರ್ಣ ಆಯಾಮವನ್ನು ನಾಯಕರು ಮೆಲುಕು ಹಾಕಿದರು. ಸಂಬಂಧದ ಮಹತ್ವವನ್ನು ಗಮನದಲ್ಲಿಟ್ಟುಕೊಂಡು, ಭಾರತ-ಇಥಿಯೋಪಿಯಾ ಸಂಬಂಧಗಳನ್ನು ಕಾರ್ಯತಂತ್ರದ ಪಾಲುದಾರಿಕೆಯ ಮಟ್ಟಕ್ಕೆ ಕೊಂಡೊಯ್ಯಲು ನಾಯಕರು ಒಪ್ಪಿಕೊಂಡರು. ಜಾಗತಿಕ ದಕ್ಷಿಣದ ಪಾಲುದಾರರಾಗಿ, ಉಭಯ ದೇಶಗಳು ಎಲ್ಲರನ್ನೂ ಒಳಗೊಂಡ ಜಗತ್ತಿನ ನಿರ್ಮಾಣಕ್ಕೆ ಕೊಡುಗೆಯನ್ನು ಮುಂದುವರಿಸಬೇಕು ಎಂದು ಅವರು ಹೇಳಿದರು. 2023 ರಲ್ಲಿ ಭಾರತದ G20 ಅಧ್ಯಕ್ಷತೆಯ ಅವಧಿಯಲ್ಲಿ, ಆಫ್ರಿಕನ್ ಒಕ್ಕೂಟವನ್ನು ಗುಂಪಿನ ಸದಸ್ಯರಾಗಿ ಸ್ವಾಗತಿಸಿದ್ದು, ಭಾರತಕ್ಕೆ ದೊರೆತ ಅಪೂರ್ವ ಗೌರವ ಎಂದು ಪ್ರಧಾನಿ ಮೋದಿ ಒತ್ತಿ ಹೇಳಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಭಾರತದ ಬೆನ್ನಿಗೆ ನಿಂತಿದ್ದಕ್ಕೆ ಮತ್ತು ಭಯೋತ್ಪಾದನೆಯ ವಿರುದ್ಧ ಜಾಗತಿಕ ಹೋರಾಟವನ್ನು ಬಲಪಡಿಸಿದ್ದಕ್ಕಾಗಿ ಇಥಿಯೋಪಿಯಾಕ್ಕೆ ಪ್ರಧಾನಮಂತ್ರಿ ಮೋದಿ ಧನ್ಯವಾದಗಳನ್ನು ಸಲ್ಲಿಸಿದರು.

3. ಉಭಯ ನಾಯಕರು ವ್ಯಾಪಾರ ಮತ್ತು ಹೂಡಿಕೆ, ನಾವೀನ್ಯತೆ ಮತ್ತು ತಂತ್ರಜ್ಞಾನ, ಶಿಕ್ಷಣ ಮತ್ತು ಸಾಮರ್ಥ್ಯ ವರ್ಧನೆ ಮತ್ತು ರಕ್ಷಣಾ ಸಹಕಾರದ ಕ್ಷೇತ್ರಗಳನ್ನು ಒಳಗೊಂಡಂತೆ ಭಾರತ ಮತ್ತು ಇಥಿಯೋಪಿಯಾ ನಡುವಿನ ಬಹುಮುಖ ಪಾಲುದಾರಿಕೆಯಲ್ಲಿ ಪ್ರಗತಿಯನ್ನು ಪರಿಶೀಲಿಸಿದರು. ಆರೋಗ್ಯ ಭದ್ರತೆ, ಡಿಜಿಟಲ್ ಆರೋಗ್ಯ, ಸಾಂಪ್ರದಾಯಿಕ ಔಷಧಿ, ಜನ ಔಷಧಿ ಕೇಂದ್ರ, ಆಹಾರ ಭದ್ರತೆ, ಸುಸ್ಥಿರ ಕೃಷಿ, ನೈಸರ್ಗಿಕ ಕೃಷಿ ಮತ್ತು ಕೃಷಿ-ತಂತ್ರಜ್ಞಾನದ ಕ್ಷೇತ್ರಗಳಲ್ಲಿ ಇಥಿಯೋಪಿಯಾದೊಂದಿಗೆ ಸಹಯೋಗವನ್ನು ಹೆಚ್ಚಿಸಲು ಭಾರತದ ಇಚ್ಛೆಯನ್ನು ಪ್ರಧಾನಮಂತ್ರಿ ಮೋದಿ ತಿಳಿಸಿದರು. ದೇಶಗಳ ನಡುವಿನ ನಿಕಟ ಅಭಿವೃದ್ಧಿ ಪಾಲುದಾರಿಕೆಯು ಜನರ ನಡುವಿನ ಬಲವಾದ ಸಂಬಂಧಗಳ ಮೌಲ್ಯವನ್ನು ಹೆಚ್ಚಿಸುತ್ತಿದೆ ಎಂದು ನಾಯಕರು ಒತ್ತಿಹೇಳಿದರು.

4. ಉಭಯ ನಾಯಕರು ಎರಡೂ ದೇಶಗಳ ನಡುವಿನ ಆರ್ಥಿಕ ಪಾಲುದಾರಿಕೆಯನ್ನು ಪರಿಶೀಲಿಸಿದರು. ಅವರು ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಗಣಿಗಾರಿಕೆ, ನಿರ್ಣಾಯಕ ಖನಿಜಗಳು ಮತ್ತು ಸ್ವಚ್ಛ ಇಂಧನ ಕ್ಷೇತ್ರಗಳಲ್ಲಿ ಸಹಕಾರದ ಬಗ್ಗೆ ಚರ್ಚಿಸಿದರು. ಭಾರತೀಯ ಕಂಪನಿಗಳು ವಿಶ್ವಾಸಾರ್ಹ ಪಾಲುದಾರರಾಗಿ, ಇಥಿಯೋಪಿಯನ್ ಆರ್ಥಿಕತೆಯಲ್ಲಿ, ವಿಶೇಷವಾಗಿ ಉತ್ಪಾದನೆ ಮತ್ತು ಔಷಧಿಗಳ ಅಗತ್ಯ ವಲಯಗಳಲ್ಲಿ, 5 ಬಿಲಿಯನ್ ಡಾಲರ್‌ಗಳಿಗಿಂತ ಹೆಚ್ಚು ಹೂಡಿಕೆ ಮಾಡಿವೆ, 75,000 ಕ್ಕೂ ಹೆಚ್ಚು ಸ್ಥಳೀಯ ಉದ್ಯೋಗಗಳನ್ನು ಸೃಷ್ಟಿಸಿವೆ ಎಂದು ಪ್ರಧಾನಮಂತ್ರಿ ಮೋದಿ ಹೇಳಿದರು.

5. ಜಾಗತಿಕ ದಕ್ಷಿಣದ ಕಾಳಜಿಗಳಿಗೆ ಧ್ವನಿ ಎತ್ತಲು ಒಟ್ಟಾಗಿ ಕೆಲಸ ಮಾಡುವ ಬದ್ಧತೆಯನ್ನು ಇಬ್ಬರೂ ಪ್ರಧಾನಮಂತ್ರಿಗಳು ಪುನರುಚ್ಚರಿಸಿದರು. ಅವರು ವಿಶ್ವಸಂಸ್ಥೆ ಸೇರಿದಂತೆ ಬಹುಪಕ್ಷೀಯ ಕ್ಷೇತ್ರದಲ್ಲಿ ಸಹಕಾರದ ಬಗ್ಗೆ ಚರ್ಚಿಸಿದರು. ಹವಾಮಾನ ಬದಲಾವಣೆ, ನವೀಕರಿಸಬಹುದಾದ ಇಂಧನ ಮತ್ತು ವಿಪತ್ತು ಅಪಾಯ ತಗ್ಗಿಸುವಂತಹ ವಿಷಯಗಳ ಬಗ್ಗೆ ಹೆಚ್ಚಿನ ಸಹಕಾರಕ್ಕಾಗಿ ಅವರು ಕರೆ ನೀಡಿದರು ಮತ್ತು ಈ ನಿಟ್ಟಿನಲ್ಲಿ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ ಅಲಾಯನ್ಸ್ (IBCA), ವಿಪತ್ತು ಸ್ಥಿತಿಸ್ಥಾಪಕ ಮೂಲಸೌಕರ್ಯ ಒಕ್ಕೂಟ (CDRI), ಜಾಗತಿಕ ಜೈವಿಕ ಇಂಧನ ಮೈತ್ರಿ (GBA) ಮತ್ತು ಅಂತಾರಾಷ್ಟ್ರೀಯ ಸೌರ ಮೈತ್ರಿ (ISA) ಮುಂತಾದ ಅಂತಾರಾಷ್ಟ್ರೀಯ ಸಂಸ್ಥೆಗಳ ಪಾತ್ರವನ್ನು ಅವರು ಸ್ವಾಗತಿಸಿದರು. ಭಾರತವು ತನ್ನ ಅಧ್ಯಕ್ಷತೆಯಲ್ಲಿ ಬ್ರಿಕ್ಸ್ ಪಾಲುದಾರರಾಗಿ ಇಥಿಯೋಪಿಯಾದೊಂದಿಗೆ ಕೆಲಸ ಮಾಡಲು ಮತ್ತು ಪ್ರಸ್ತಾವಿತ ಭಾರತ-ಆಫ್ರಿಕಾ ಫೋರಂ ಶೃಂಗಸಭೆಗಾಗಿ ಕೆಲಸ ಮಾಡಲು ಎದುರು ನೋಡುತ್ತಿದೆ ಎಂದು ಪ್ರಧಾನಮಂತ್ರಿ ಮೋದಿ ಹೇಳಿದರು.

6. ಮಾತುಕತೆಯ ನಂತರ, ಇಬ್ಬರೂ ನಾಯಕರು ಈ ಕ್ಷೇತ್ರಗಳಲ್ಲಿ ಮೂರು ತಿಳಿವಳಿಕೆ ಒಪ್ಪಂದಗಳ ವಿನಿಮಯಕ್ಕೆ ಸಾಕ್ಷಿಯಾದರು: ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳ ತರಬೇತಿ; ಕಸ್ಟಮ್ಸ್ ವಿಷಯಗಳಲ್ಲಿ ಪರಸ್ಪರ ಆಡಳಿತಾತ್ಮಕ ನೆರವು; ಮತ್ತು ಇಥಿಯೋಪಿಯಾದ ವಿದೇಶಾಂಗ ವ್ಯವಹಾರಗಳ ಸಚಿವಾಲಯದಲ್ಲಿ ಮಾಹಿತಿ ಕೇಂದ್ರದ ಸ್ಥಾಪನೆ.

7. ಪ್ರಧಾನಮಂತ್ರಿ ಡಾ. ಅಬಿ ಅವರು ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರ ಗೌರವಾರ್ಥ ಔತಣಕೂಟ ಆಯೋಜಿಸಿದ್ದರು. ಪ್ರಧಾನಮಂತ್ರಿ ಮೋದಿ ಅವರು ಭಾರತಕ್ಕೆ ಭೇಟಿ ನೀಡುವಂತೆ ಪ್ರಧಾನಿ ಡಾ. ಅಬಿ ಅವರನ್ನು ಆಹ್ವಾನಿಸಿದರು, ಅದನ್ನು ಅವರು ಅಂಗೀಕರಿಸಿದರು.

ಅಡಿಸ್ ಅಬಾಬಾ

ಡಿಸೆಂಬರ್ 16, 2025